# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 213 (249) |
| ಮಾನ್ಯ ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 17/02/2022 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಸ್ಥಳೀಯ ಸಂಸ್ಥೆಗಳಿಂದ ವಸೂಲಾದ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವೆಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿಯನ್ನು ನೀಡುವುದು) | ಕಳೆದ ಮೂರು ವರ್ಷದಲ್ಲಿ ಸ್ಥಳೀಯ ಸಂಸ್ಥೆಗಳ ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ ರೂ. 198.10 ಕೋಟಿಗಳಷ್ಟು ಸೆಸ್ ಮೊತ್ತವನ್ನು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಸಂಗ್ರಹಿಸಲಾಗಿರುತ್ತದೆ.<br>ವರ್ಷವಾರು ವಿವರ ಈ ಕೆಳಕಂಡಂತಿದೆ:<br>(ಕ್ರ.ಸಂ / ವರ್ಷ / ಸಂಗ್ರಹವಾದ ಸೆಸ್ ಮೊತ್ತ (ರೂ. ಕೋಟಿಗಳಲ್ಲಿ))<br>1 / 2018-2019 / 105.92<br>2 / 2019-2020 / 64.21<br>3 / 2020-2021 / 27,99<br>ಒಟ್ಟು / 198,10<br>ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-01** ರಲ್ಲಿ ಸಲ್ಲಿಸಿದೆ. |
| ಆ) | ಕಾರ್ಮಿಕರ ಕಲ್ಯಾಣಕ್ಕಾಗಿ ಇಲಾಖೆಯಿಂದ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳು ಯಾವುವು; ಅವುಗಳ ಆಯ್ಕೆಯ ಮಾನದಂಡಗಳು ಯಾವುವು; (ಕಾರ್ಯಕ್ರಮವಾರು ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಮಂಡಳಿಗಳಲ್ಲಿ ಜಾರಿಗೊಳಿಸುತ್ತಿರುವ ವಿವಿಧ ಕಲ್ಯಾಣ ಯೋಜನೆಗಳ ವಿವರ ಹಾಗೂ ಸಂಬಂಧಪಟ್ಟ ಆಯ್ಕೆಯ ಮಾನದಂಡಗಳು ಈ ಕೆಳಗಿನಂತಿದೆ.<br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br>ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗಾಗಿ ಮಂಡಳಿಯು ರೂಪಿಸಿರುವ ಸೌಲಭ್ಯಗಳ ವಿವರವನ್ನು **ಅನುಬಂಧ-02** ರಲ್ಲಿ ಲಗತ್ತಿಸಿದೆ.<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ರ ಕಲಂ 22 ರಡಿಯಲ್ಲಿ ಮಂಡಳಿಯ ಫಲಾನುಭವಿಗಳಿಗೆ ಸೌಲಭ್ಯಗಳನ್ನು ರೂಪಿಸಲು ಈ ಕೆಳಕಂಡ ಪ್ರವಧಾನಗಳಿವೆ. ಸದರಿ ಪ್ರವಧಾನಗಳನ್ವಯ ಮಂಡಳಿಯ ಫಲಾನುಭವಿಗಳಿಗೆ ಸೌಲಭ್ಯಗಳನ್ನು ರೂಪಿಸಲಾಗಿದೆ. |

The Board may-

(a) provide immediate assistance to a beneficiary in case of accident;

(b) make payment of pension to the beneficiaries who have completed the age of sixty years;

(c) sanction loans and advances to a beneficiary for construction of a house not exceeding such amount and on such terms and conditions as may be prescribed;

(d) pay such amount in connection with premia for Group Insurance Scheme of the beneficiaries as it may deem fit;

(e) give such financial assistance for the education of children of the beneficiaries as may be prescribed;

(f) meet such medical expenses for treatment of major ailments of a beneficiary or, such dependant, as may be prescribed;

(g) make payment of maternity benefit to the female beneficiaries; and

(h) make provision and improvement of such other welfare measures and facilities as may be prescribed.

(2) The Board may grant loan or subsidy to a local authority or an employer in aid of any scheme approved by the State Government for the purpose connected with the welfare of building workers in any establishment

(3) The Board may pay annually grants-in-aid to a local authority or to an employer who provides to the satisfaction of the Board welfare measures and facilities of the standard specified by the Board for the benefit of the building workers and the members of their family, so, however, that the amount payable as grants-in-aid to any local authority or employer shall not exceed-

| | | |
|---|---|---|
| | | **ಕಾರ್ಮಿಕ ಕಲ್ಯಾಣ ಮಂಡಳಿ:-**<br><br>ಕಾರ್ಮಿಕ ಕಲ್ಯಾಣ ಮಂಡಳಿಯ ಅಧೀನದಲ್ಲಿರುವ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರಿಗಾಗಿ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಮಂಡಳಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40-ರಂತೆ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುವುದು.<br>(20:40:20 ದರದಲ್ಲಿ ಕಾರ್ಮಿಕರಿಂದ ರೂ 20/- ಮಾಲೀಕರು/ಸಂಸ್ಥೆಯಿಂದ ರೂ 40/- ಹಾಗೂ ಸರ್ಕಾರದಿಂದ ರೂ 20/- ದಲ್ಲಿ ವಂತಿಕೆಯು ಮಂಡಳಿಯು ಸ್ವೀಕರಿಸುತ್ತದೆ)<br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ.<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು.<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ.<br>4) ಹೆರಿಗೆ ಭತ್ಯೆ ಸೌಲಭ್ಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೋಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ<br><br>ಫಲಾನುಭವಿಗಳ ಆಯ್ಕೆಗೆ ಸಂಬಂಧಿಸಿದ ಮಾನದಂಡದ ವಿವರಗಳನ್ನು **ಅನುಬಂಧ-3** ರಲ್ಲಿ ಲಗತ್ತಿಸಿದೆ. |
| ಇ) | ಕಳೆದ ಮೂರು ವರ್ಷಗಳಲ್ಲಿ ಕಾರ್ಮಿಕ ಕಲ್ಯಾಣ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾದ ಮೊತ್ತವೆಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು) | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br>ಕಳೆದ ಮೂರು ವರ್ಷದಲ್ಲಿ ವಿವಿಧ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಲಭ್ಯಗಳಡಿ ಮಂಡಳಿಯ ವತಿಯಿಂದ 5,00,382 ಫಲಾನುಭವಿಗಳಿಗೆ ರೂ. 579.70 ಕೋಟಿಗಳಷ್ಟು ಸಹಾಯ ಧನ ಬಿಡುಗಡೆ ಮಾಡಲಾಗಿದೆ.<br>ವರ್ಷವಾರು ಕಾರ್ಮಿಕ ಇಲಾಖೆಯ ವಿಭಾಗ ಹಾಗೂ ಉಪ ವಿಭಾಗ ಕಛೇರಿಗಳ ಬಿಡುಗಡೆ ಮಾಡಿರುವ ಮೊತ್ತದ ಮಾಹಿತಿಯನ್ನು **ಅನುಬಂಧ -04** ರಲ್ಲಿ ಒದಗಿಸಿದೆ.<br>ಇದಲ್ಲದೇ, ಕೋವಿಡ್-19 ರ ಹಿನ್ನಲೆಯಲ್ಲಿ ಮೊದಲನೇ ಆಲೆಯ ಹಿನ್ನಲೆಯಲ್ಲಿ ವಿಧಿಸಿದ ಲಾಕ್‌ಡೌನ್ ನಿಂದಾಗಿ ಸಂಕಷ್ಟಕ್ಕೊಳಗಾದ 16,48,431 ಕಾರ್ಮಿಕರಿಗೆ ತಲಾ ರೂ.5,000/- ದಂತೆ ರೂ. 824.21 ಕೋಟಿ ಮೊತ್ತವನ್ನು ಒಂದು ಬಾರಿ ಪರಿಹಾರವಾಗಿ ನೀಡಲಾಗಿರುತ್ತದೆ. ಆದೇ ರೀತಿ ಎರಡನೇ ಆಲೆಯ ಸಂಧರ್ಭದಲ್ಲಿ ತಲಾ ರೂ. 3000/- ಗಳಂತೆ **19,39,607** ಲಕ್ಷ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ರೂ. 581.88 ಕೋಟಿಗಳನ್ನು ಫಲಾನುಭವಿಗಳ ಖಾತೆಗೆ ಡಿಬಿಟಿ ಮೂಲಕ ಜಮಾ ಮಾಡಲಾಗಿರುತ್ತದೆ. ಜಿಲ್ಲಾವಾರು ವಿವರವನ್ನು **ಅನುಬಂಧ- 05** ರಲ್ಲಿ ಲಗತ್ತಿಸಿದೆ. |

| | | |
|---|---|---|
| | | **ಕಾರ್ಮಿಕ ಕಲ್ಯಾಣ ಮಂಡಳಿ**<br>ಕಳೆದ ಮೂರು ವರ್ಷಗಳಲ್ಲಿ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಕಲ್ಯಾಣ ಯೋಜನೆಗಳಿಗೆ ವೆಚ್ಚ ಮಾಡಲಾದ ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-6** ರಲ್ಲಿ ಲಗತ್ತಿಸಿದೆ. |
| **ಈ)** | ಗ್ರಾಮ ಪಂಚಾಯಿತಿ ಸೇರಿದಂತೆ ಸ್ಥಳೀಯ ಸಂಸ್ಥೆಗಳಿಂದ ವಸೂಲಿ ಮಾಡಿದ ಅಪಾರ ಮೊತ್ತದ ನಿಧಿಯನ್ನು ಬಳಕೆ ಮಾಡದೇ ಇರುವ ಅಧಿಕಾರಿಗಳ ಮೇಲೆ ಸರಕಾರದ ಕ್ರಮಗಳೇನು: | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br>ಮಂಡಳಿಯು ರೂಪಿಸಿರುವ ಸೌಲಭ್ಯಗಳು ನೊಂದಾಯಿತ ಕಟ್ಟಡ ಕಾರ್ಮಿಕರಿಗೆ ಬದುಕಿನ ವಿವಿಧ ಹಂತಗಳಲ್ಲಿ ನೀಡುವ ಸೌಲಭ್ಯಗಳಾಗಿದ್ದು, ನಿರ್ದಿಷ್ಟ ಘಟನೆಯ ಆಧಾರದ ಮೇಲೆ ಅರ್ಜಿ ಸಲ್ಲಿಸಿದಾಗ ಮಂಡಳಿಯ ವತಿಯಿಂದ ಸಹಾಯ ಧನ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ. ಈ ಕಾರಣಕ್ಕಾಗಿ ಅಧಿಕಾರಿಗಳು ಮೊತ್ತವನ್ನು ಬಳಕೆ ಮಾಡದೇ ಇರುವ ಪ್ರಶ್ನೆಯು ಉದ್ಭವಿಸುವುದಿಲ್ಲ. |
| **ಉ** | ಖರ್ಚಾಗದೇ ಇರುವ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವನ್ನು ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಿ ಕಾರ್ಮಿಕ ಕಲ್ಯಾಣ ಯೋಜನೆಯನ್ನು ಅನುಷ್ಠಾನ ಮಾಡುವ ಬಗ್ಗೆ ಸರಕಾರದ ನಿಲುವೇನು? | **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**<br>ಮಂಡಳಿಯ ಸೆಸ್ ನಿಧಿಯಿಂದ ಮೊತ್ತವನ್ನು ಕಾರ್ಮಿಕರಿಗೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳಿಗಾಗಿ ಹಾಗೂ ಮಂಡಳಿಯ ಆಡಳಿತಾತ್ಮಕ ವೆಚ್ಚಕ್ಕಾಗಿ ವಿನಿಯೋಗಿಸಬೇಕಾಗಿರುತ್ತದೆ. ಈ ಕಾರಣಕ್ಕಾಗಿ ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವನ್ನು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಿ ಕಾರ್ಮಿಕ ಕಲ್ಯಾಣ ಯೋಜನೆಯನ್ನು ಅನುಷ್ಠಾನ ಮಾಡುವ ಪ್ರಸ್ತಾವನೆ ಮಂಡಳಿಯಲ್ಲಿ ಇರುವುದಿಲ್ಲ. |

**ಕಾಇ 69 ಎಲ್‌ಇಟಿ 2022**

(ಅರಬೈಲ್ ಶಿವರಾಂ ಹೆಬ್ಬಾರ್)
**ಕಾರ್ಮಿಕ ಸಚಿವರು**

## ಅನುಬಂಧ-01

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 249 (213)

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

ಕಳೆದ ಮೂರು ವರ್ಷಗಳಿಂದ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹವಾದ ಜಿಲ್ಲಾವಾರು ಸುಂಕ ವಿವರ

| District | Amount |
|---|---|
| Bangalore | 1238704388 |
| Bangalore Rural | 68826544 |
| Bagalkot | 11623687 |
| Belgavi | 134900499 |
| Bellary | 8414413 |
| Bidar | 513698 |
| Chamrajnagar | 4741932 |
| Chikmagalur | 44498263 |
| Chitradurga | 21743798 |
| Dakshina Kannada | 7833841 |
| Davanagere | 15365419 |
| Dharwad | 2290240 |
| Gadag | 12821599 |
| Hassan | 29142012 |
| Haveri | 16058244 |
| Kalburgi | 1629698 |
| Kodagu | 2332458 |
| Kolar | 8149111 |
| Koppal | 7548588 |
| Mandya | 4704309 |
| Mysore | 50270484 |
| Raichur | 31579304 |
| Ramanagar | 17768388 |
| Shivamogga | 48226637 |
| Tumkur | 54415060 |
| Udupi | 49380025 |
| Uttara Kannada | 25062892 |
| Vijaypura | 62020961 |
| Yadgiri | 492047 |
| **Total** | **198.10 Crores** |

## ಅನುಬಂಧ-2

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮುನಿರಾಜು ಗೌಡ ಎಂ. ಪಿ. (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 286

**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ(ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯಅವಲಂಭಿತರಿಗೆ(ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. **30,000/-** ಮತ್ತುಗಂಡು ಮಗುವಿನ ಜನನಕ್ಕೆರೂ.**20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ (ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |

| | | |
|---|---|---|
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |
| **ತಾಂತ್ರೀಕ/ ವೈದ್ಯಕೀಯ ಎನ್‌ಇಇಟಿ ಅಥವಾ ಕೆಸಿಇಟಿ** | | |
| 12 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿಕೋರ್ಸ್ | ಸದರಿ<br>ಕೋರ್ಸ್‌ನ ಗರಿಷ್ಠ<br>2 ವರ್ಷ ಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕರೂ. 60,000 |
| 14 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್ ಕೋರ್ಸ್‌ಗೆ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನ ಗರಿಷ್ಠ<br>ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆ ಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>ರೂ. 25,000 (ಯೂಜಿಸಿಯ<br>ಜೂನಿಯರ್ ರಿರ್ಸಚ್ ಪೆಲೋಶಿಫ್‌ಗೆ<br>ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ<br>ಮತ್ತು<br>ರಾಜ್ಯ ಸರ್ಕಾರದಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ<br>ಯೂಜಿಸಿ ನಿಯಮಗಳನ್ವಯ ವೇತನ<br>ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ<br>ಅನುದಾನಿತ<br>ಕಾಲೇಜುಗಳಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಆಭ್ಯರ್ಥಿಗಳು<br>ಈ ಸೌಲಭ್ಯವನ್ನು ಪಡೆಯಲು<br>ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/-** ರಿಂದ**ರೂ.10,000/-**ವರೆಗೆ
13. **ಅಪಘಾತ ಪರಿಹಾರ**: ಮರಣ ಹೊಂದಿದ್ದಲ್ಲಿ**ರೂ.5,00,000/-**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-** ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-**ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. **ಫಲಾನುಭವಿಯ ಮಕ್ಕಳು ಯುಪಿಎಸ್‌ಸಿ, ಕೆಪಿಎಸ್‌ಸಿ ಹುದ್ದೆಗಳಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ಮತ್ತು ಅವರ ಮಕ್ಕಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ತಗಲುವ ವೆಚ್ಚವನ್ನು ಮಂಡಳಿವತಿಯಿಂದ ಭರಿಸಲಾಗುವುದು.**
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ**ರೂ.6,000/-** ಗಳ ಸಹಾಯಧನ.

# ಅನುಬಂಧ-3

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 249 (213)**

**ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಫಲಾನುಭವಿಗಳ ಆಯ್ಕೆಗೆ ಸಂಬಂಧಿಸಿದ ಮಾನದಂಡದ ವಿವರಗಳು**

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ. ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ಸಂಸ್ಥೆಗಳು/ಪ್ಲಾಂಟೇಶನ್/ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಯೋಜನೆಗಳು ಜಾರಿಯಲ್ಲಿರುತ್ತದೆ.

**ಸೂಚನೆ :**

1. ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 15 ರೊಳಗೆ ಕಾರ್ಮಿಕರು, ಮಾಲೀಕರು ರೂ. 20 : 40 ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಒಟ್ಟು ರೂ. 60/- ಗಳಂತೆ ವಂತಿಕೆಯನ್ನು ಕಾರ್ಮಿಕ ಕಲ್ಯಾಣ ನಿಧಿಗೆ ಪಾವತಿಸತಕ್ಕದ್ದು.
2. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ವಿದ್ಯಾರ್ಥಿಗಳು, ಶೈಕ್ಷಣಿಕ ಸಂಸ್ಥೆಗಳು, ಕಾರ್ಖಾನೆಗಳು/ಸಂಸ್ಥೆಗಳು ತಿತಿತಿ.ಇಟತಿಛ.ಇಚಿಡಿಟಿಚಿಣಚಿಞಚಿ.ರಂತಿ.ಟಿ ಇಲ್ಲಿ ನೊಂದಾಯಿಸಿ ಅನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ.
3. ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು ತಿತಿತಿ.ಇಟತಿಛ.ಇಚಿಡಿಟಿಚಿಣಚಿಞಚಿ.ರಂತಿ.ಟಿ ಇಲ್ಲಿ ತಮ್ಮ ಸಂಸ್ಥೆಗಳನ್ನು ನೊಂದಾಯಿಸಿ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

**ಈ ಕೆಳಗಿನ ಯೋಜನೆಗಳಿಗೆ ಮಾಸಿಕ ವೇತನ ರೂ. 21,000/- ಗಿಂತ ಮೀರಿರಬಾರದು. ವಯೋಮಿತಿ 18- 60**

1. ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ: ಪ್ರೌಢ ಶಾಲೆ, (8 ರಿಂದ 10ನೇ ತರಗತಿವರೆಗೆ) ರೂ.3,000/ ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.4,000/-ಪದವಿ ಶಿಕ್ಷಣಕ್ಕಾಗಿ ರೂ.5,000/ ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.6,000/-ಇಂಜಿನೀಯರಿಂಗ್/ವೈದ್ಯಕೀಯ ಶಿಕ್ಷಣಕ್ಕಾಗಿ ರೂ.10,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು.(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ.ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)

2. ಕಾರ್ಮಿಕರಿಗೆ ವೈದ್ಯಕೀಯ ನೆರವು : ಹೃದಯ ಶಸ್ತ್ರಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ ರೂ. 1,000/-ದಿಂದ ಗರಿಷ್ಠ ರೂ.25,000/-ವರೆಗೆ ಮತ್ತು ಆರೋಗ್ಯ ತಪಾಸಣೆಗೆ ರೂ. 500/-ರಿಂದ ರೂ. 1000/-ವರೆಗೆ ಧನ ಸಹಾಯ ನೀಡಲಾಗುವುದು.

3. ಕಾರ್ಮಿಕರಿಗೆ ಅಪಘಾತ ಧನ ಸಹಾಯ : ಕಾರ್ಮಿಕರಿಗೆ ಕೆಲಸದ ವೇಳೆಯಲ್ಲಿ ಅಪಘಾತವಾದಲ್ಲಿ ಕನಿಷ್ಠ ರೂ. 1,000/- ಗರಿಷ್ಠ ರೂ. 10,000/- ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4. ಹೆರಿಗೆ ಭತ್ಯೆ ಸೌಲಭ್ಯ : ಮಹಿಳಾ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಭತ್ಯೆ ಸೌಲಭ್ಯವನ್ನು ತಲಾ ರೂ. 10,000/- ಧನ ಸಹಾಯ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗಾಗಿ ಅರ್ಜಿ ಸಲ್ಲಿಸತಕ್ಕದ್ದು.

ಈ ಕೆಳಗಿನ ಯೋಜನೆಗಳಿಗೆ ಮಾಸಿಕ ಸಂಬಳದ ಮಿತಿಯಿರುವುದಿಲ್ಲ. ವಯೋಮಿತಿ 18- 60

5. ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ :ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು

ಕಾರ್ಮಿಕ ಮೃತಪಟ್ಟ ಆರು ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, ರೂ. 10,000/- ಧನ ಸಹಾಯ ನೀಡಲಾಗುವುದು.

6. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ : ನೋಂದಾಯಿತ ಕಾರ್ಮಿಕ ಸಂಘಟನೆಗಳು/ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ ರೂ. 1,00,000/- ಧನ ಸಹಾಯ ನೀಡಲಾಗುವುದು.

7. ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ : ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ ರೂ. 1,00,000/- ಧನ ಸಹಾಯ ನೀಡಲಾಗುವುದು.

ಧನ ಸಹಾಯವನ್ನು ಫಲಾನುಭವಿಗಳ ಉಳಿತಾಯ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್ ಮೂಲಕ ಜಮಾ ಮಾಡಲಾಗುವುದು.

| | | | | | | | | | | | | | | | | | | | | | | | | | | | | | |
|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|---|
| 44 | ಕಾ.ಕ. ಮಂಗಳೂರು-1 | 2404 | 12861000 | 0 | 0 | 27 | 327163 | 18 | 43900 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 2449 | 13232063 |
| 45 | ಕಾ.ಅ. ಮಂಗಳೂರು-2 | 2933 | 16158000 | 386 | 11550000 | 33 | 340159 | 5 | 4500 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 1 | 200000 | 3358 | 28252659 |
| 46 | ಕಾ.ಕ. ಮೈಸೂರು | 1254 | 10866000 | 526 | 13150000 | 61 | 2487537 | 8 | 15300 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 1849 | 26518837 |
| 47 | ಕಾ.ಕ. ರಾಯಚೂರು | 2341 | 21217000 | 393 | 9825000 | 35 | 1671599 | 0 | 0 | 31 | 740000 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 1 | 300000 | 2801 | 33753599 |
| 48 | ಕಾ.ಅ. ರಾಮನಗರ | 923 | 9355000 | 323 | 8075000 | 52 | 1540872 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 1298 | 18970872 |
| 49 | ಕಾ.ಕ. ಶಿವಮೊಗ್ಗ | 8870 | 77992000 | 696 | 17500000 | 104 | 1994207 | 78 | 836768 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 2 | 400000 | 9750 | 98722975 |
| 50 | ಕಾ.ಅ. ತುಮಕೂರು | 4504 | 34440900 | 1203 | 30125000 | 100 | 2530479 | 6 | 19793 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 5813 | 67116172 |
| 51 | ಕಾ.ಕ. ಉಡುಪಿ | 2879 | 26676000 | 362 | 9050000 | 63 | 547690 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 3304 | 36273690 |
| 52 | ಕಾ.ಅ. ಯಾದಗಿರಿ | 3488 | 27091000 | 514 | 12850000 | 20 | 795580 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 4022 | 40736580 |
| | ಪಿಂಚಣಿ ಸೌಲಭ್ಯ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | | | 1545 | 15184000 | 38 | 1206000 | 5 | 5000 | | | 1588 | 16395000 |
| ಒಟ್ಟು | | 114557 | 861110660 | 16291 | 422430000 | 1216 | 45419135 | 212 | 2530550 | 81 | 1650000 | 27 | 162000 | 3342 | 180706000 | 126 | 21559000 | 2 | 450000 | 1659 | 27744000 | 38 | 1368000 | 5 | 24000 | 27 | 5350000 | 137583 | 1570503345 |

# ಅನುಬಂಧ-05

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 249 (213)

**ಮಂಡಳಿಯಿಂದ ಕೋವಿಡ್-19 ಸಂದರ್ಭದಲ್ಲಿ ನೋಂದಾಯಿತ ಫಲಾನುಭವಿಗಳಿಗೆ ವಿತರಿಸಿದ ಪರಿಹಾರದ ಜಿಲ್ಲಾವಾರು ವಿವರ**

| ಕ್ರಸಂ | ಜಿಲ್ಲೆ | ಮೊದಲನೇ ಅಲೆ ಸಂದರ್ಭಲ್ಲಿತಲಾ ರೂ.5000/- ಗಳನ್ನು ಪಡೆದ ಫಲಾನುಭವಿಗಳ ಸಂಖ್ಯೆ | ಎರಡನೇ ಅಲೆ ಸಂದರ್ಭಲ್ಲಿತಲಾ ರೂ.3000/- ಗಳನ್ನು ಪಡೆದ ಫಲಾನುಭವಿಗಳ ಸಂಖ್ಯೆ |
|---|---|---|---|
| 1 | ಬಾಗಲಕೋಟೆ | 29527 | 54405 |
| 2 | ಬೆಳಗಾವಿ | 69981 | 100489 |
| 3 | ಬಳ್ಳಾರಿ | 82841 | 60193 |
| 4 | ಬೆಂಗಳೂರು | 83767 | 155261 |
| 5 | ಬೀದರ್ | 71614 | 138876 |
| 6 | ಬಿಜಾಪುರ | 45625 | 58051 |
| 7 | ಚಾಮರಾಜನಗರ | 54659 | 29408 |
| 8 | ಚಿಕ್ಕಬಳ್ಳಾಪುರ | 23746 | 22220 |
| 9 | ಚಿಕ್ಕಮಗಳೂರು | 34729 | 29408 |
| 10 | ಚಿತ್ರದುರ್ಗ | 78532 | 62498 |
| 11 | ದಾವಣಗೆರೆ | 84308 | 81015 |
| 12 | ಗದಗ | 23849 | 37738 |
| 13 | ಹಾಸನ | 72903 | 67244 |
| 14 | ಹಾವೇರಿ | 44376 | 103693 |
| 15 | ಹುಬ್ಬಳ್ಳಿ | 77085 | 70590 |
| 16 | ಕಲಬುರಗಿ | 84917 | 155622 |
| 17 | ಕಾರವಾರ | 78941 | 56325 |
| 18 | ಕೋಲಾರ | 66589 | 52814 |
| 19 | ಕೊಪ್ಪಳ | 76899 | 67349 |
| 20 | ಮಡಿಕೇರಿ | 2862 | 3844 |
| 21 | ಮಂಡ್ಯ | 41089 | 18961 |
| 22 | ಮಂಗಳೂರು | 56382 | 45226 |
| 23 | ಮೈಸೂರು | 65002 | 59676 |
| 24 | ರಾಯಚೂರು | 54148 | 36033 |
| 25 | ರಾಮನಗರ | 29090 | 26092 |
| 26 | ಶಿವಮೊಗ್ಗ | 113439 | 81840 |
| 27 | ತುಮಕೂರು | 41182 | 47473 |
| 28 | ಉಡುಪಿ | 32598 | 30444 |
| 29 | ಯಾದಗಿರಿ | 27751 | 112700 |
| | ಒಟ್ಟು | **16,48,431** | **19,39,607** |

## ಅನುಬಂಧ-6

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 249 (213)

**ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಕಲ್ಯಾಣ ಯೋಜನೆಗಳಿಗೆ ವೆಚ್ಚ ಮಾಡಲಾದ ವರ್ಷವಾರು ಮತ್ತು ಜಿಲ್ಲಾವಾರು ವಿವರಗಳು**

| ಕ್ರ.ಸಂ | ಜಿಲ್ಲೆ | 2018-19 | | 2019-20 | | 2020-21 | |
|---|---|---|---|---|---|---|---|
| | | ಫಲಾನುಭವಿಗಳು | ಮೊತ್ತ | ಫಲಾನುಭವಿಗಳು | ಮೊತ್ತ | ಫಲಾನುಭವಿಗಳು | ಮೊತ್ತ |
| 1 | ಬೆಂಗಳೂರು ನಗರ | 6849 | 2,86,32,500 | 8374 | 3,21,03,000 | 4853 | 2,12,52,000 |
| 2 | ಉಡುಪಿ | 2468 | 1,01,59,000 | 2945 | 1,20,53,000 | 521 | 20,80,000 |
| 3 | ದಕ್ಷಿಣ ಕನ್ನಡ | 1195 | 49,03,000 | 1600 | 67,31,000 | 1044 | 49,95,000 |
| 4 | ತುಮಕೂರು | 1921 | 74,15,000 | 2188 | 84,46,000 | 900 | 36,14,000 |
| 5 | ಬೆಂಗಳೂರು (ಗ್ರಾ) | 1294 | 51,33,000 | 1719 | 70,80,000 | 2997 | 1,20,12,000 |
| 6 | ಬೆಳಗಾಂ | 1233 | 49,17,011 | 1082 | 44,47,000 | 723 | 29,80,000 |
| 7 | ಮೈಸೂರು | 1534 | 35,67,000 | 1423 | 54,25,252 | 451 | 20,58,000 |
| 8 | ಮಂಡ್ಯ | 1077 | 41,35,000 | 1528 | 53,09,000 | 659 | 30,87,000 |
| 9 | ರಾಮನಗರ | 659 | 25,74,000 | 912 | 34,07,000 | 221 | 9,37,000 |
| 10 | ಚಿಕ್ಕಬಳ್ಳಾಪುರ | 697 | 26,23,000 | 768 | 28,77,000 | 105 | 5,06,000 |
| 11 | ಶಿವಮೊಗ್ಗ | 736 | 29,84,000 | 1104 | 43,90,000 | 603 | 23,90,000 |
| 12 | ಹಾಸನ | 474 | 19,98,000 | 1215 | 47,09,000 | 415 | 17,99,000 |
| 13 | ಧಾರವಾಡ | 162 | 7,53,000 | 261 | 10,42,000 | 106 | 5,18,000 |
| 14 | ದಾವಣಗೆರೆ | 242 | 10,63,000 | 274 | 11,84,000 | 105 | 4,86,000 |
| 15 | ಚಿತ್ರದುರ್ಗ | 263 | 9,77,000 | 299 | 11,37,000 | 23 | 92,000 |
| 16 | ಉತ್ತರ ಕನ್ನಡ | 301 | 11,78,000 | 317 | 12,34,000 | 48 | 1,94,000 |
| 17 | ಚಿಕ್ಕಮಗಳೂರು | 253 | 10,90,000 | 242 | 10,03,000 | 46 | 2,13,000 |
| 18 | ಬಾಗಲಕೋಟೆ | 160 | 6,45,000 | 127 | 5,18,000 | 58 | 2,29,000 |
| 19 | ಕೊಡಗು | 37 | 1,69,000 | 84 | 3,73,000 | 26 | 1,25,000 |
| 20 | ಗದಗ | 95 | 3,94,000 | 75 | 3,12,000 | 35 | 1,63,000 |
| 21 | ಕೋಲಾರ | 138 | 5,25,000 | 645 | 25,60,000 | 329 | 13,76,000 |
| 22 | ವಿಜಯಪುರ | 49 | 2,38,000 | 47 | 2,18,000 | 36 | 1,87,000 |

| | | | | | | | |
|---|---|---|---|---|---|---|---|
| 23 | ಹಾವೇರಿ | 98 | 4,04,000 | 112 | 4,09,000 | 106 | 3,87,000 |
| 24 | ಚಾಮರಾಜನಗರ | 63 | 2,69,000 | 74 | 3,04,000 | 11 | 61,000 |
| 25 | ಕಲಬುರ್ಗಿ | 37 | 1,60,000 | 37 | 1,80,000 | 39 | 1,91,000 |
| 26 | ಬೀದರ್ | 37 | 1,92,000 | 19 | 92,000 | 8 | 37,000 |
| 27 | ಬಳ್ಳಾರಿ | 67 | 2,83,000 | 50 | 1,88,000 | 20 | 80,000 |
| 28 | ಕೊಪ್ಪಳ | 12 | 42,000 | 16 | 64,000 | 4 | 16,000 |
| 29 | ರಾಯಚೂರು | 5 | 26,000 | 14 | 62,000 | 2 | 6,00,000 |
| 30 | ಯಾದಗಿರಿ | 8 | 45,000 | 6 | 37,000 | 33 | 1,51,000 |
| | **ಒಟ್ಟು** | **22164** | **8,74,96,011** | **27557** | **10,68,78,252** | **14527** | **6,28,16,000** |